## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ತಯಾರಿಕೆ ಕುರಿತು.

**ಓದಲಾಗಿದೆ:1.** ಸರ್ಕಾರ ಆದೇಶ ಸಂಖ್ಯೆ:ಗ್ರಾಅಪ/270/ಗ್ರಾಪಂಅ/2021, ದಿನಾಂಕ: 27.07.2021.

**2.** ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ "ಸುಸ್ಥಿರ ಅಭಿವೃದ್ಧಿ ಗುರಿಗಳ ಸ್ಥಳೀಕರಣ ವರದಿ"ಯ ಅನ್ವಯ.

***

**ಪ್ರಸ್ತಾವನೆ:-**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 309 (ಬಿ)ರನ್ವಯ ಗ್ರಾಮ ಪಂಚಾಯಿತಿಗಳು ಹೊಸದಾಗಿ ರಚನೆಯಾದ ಮೂರು (3) ತಿಂಗಳಲ್ಲಿ ಐದು (5) ವರ್ಷಗಳ ದೂರದೃಷ್ಟಿ ಯೋಜನೆಯನ್ನು ತಯಾರಿಸುವುದು ಕಡ್ಡಾಯವಾಗಿರುತ್ತದೆ. ಸದರಿ ಯೋಜನೆಯನ್ನು ಸಿದ್ಧಪಡಿಸುವ ಸಂದರ್ಭದಲ್ಲಿ ಜನವಸತಿ ಸಭಾ, ವಾರ್ಡ್ ಸಭಾ ಮತ್ತು ಗ್ರಾಮಸಭೆಗಳ ಸದಸ್ಯರನ್ನು ಮತ್ತು ಸಂಪನ್ಮೂಲಗಳನ್ನು ಗಮನದಲ್ಲಿಟ್ಟುಕೊಂಡು ಸಹಭಾಗೀ ಗ್ರಾಮೀಣ ಪರಾಮರ್ಶೆಯ ಮೂಲಕ ಸಿದ್ಧಪಡಿಸಬೇಕಿದೆ. ಈ ಪ್ರಯತ್ನದಲ್ಲಿ ಸ್ಥಳೀಯ ಗುರಿಗಳನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರವು ಸ್ಥಾಪಿಸಿದ ಅಭಿವೃದ್ಧಿ ಮೈಲಿಗುರುತುಗಳ ಆಧಾರವನ್ನಾಗಿಸಿ ಗುರುತಿಸಬೇಕಿರುತ್ತದೆ. ಇದರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಗಳನ್ನೊಳಗೊಂಡು ಇತರೆ ಅಭಿವೃದ್ಧಿ ಇಲಾಖೆಗಳ ವಿಷಯಗಳನ್ನು ಪರಾಮರ್ಶಿಸುವ ಮುಖೇನ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸುವುದಾಗಿರುತ್ತದೆ. ಇದಕ್ಕೆ ಪೂರಕವೆಂಬಂತೆ ಅಧಿನಿಯಮದ ಪ್ರಕರಣ 58 ರಲ್ಲಿ ಗ್ರಾಮ ಪಂಚಾಯತಿಗಳು ನಿರ್ದಿಷ್ಟಪಡಿಸಿದ ಪ್ರಕಾರ್ಯಗಳನ್ನು ನೆರವೇರಿಸಬೇಕಿದ್ದು, ಅನುಸೂಚಿ-1 ರ ಪಟ್ಟಿಯ ವಿಷಯಗಳನ್ನು ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ನೆರವೇರಿಸಬೇಕಾಗಿರುತ್ತದೆ.

ಸ್ವಯಂ ಆಡಳಿತದ ಸಂಸ್ಥೆಗಳಾದ ಗ್ರಾಮ ಪಂಚಾಯಿತಿಗಳು ಸಮಗ್ರ ಅಭಿವೃದ್ಧಿಯನ್ನು ಸಾಧಿಸುವುದು ಮತ್ತು ಸಾಮಾಜಿಕ ನ್ಯಾಯ ಸ್ಥಾಪನೆಗಾಗಿ ಸುರಕ್ಷಿತವಲ್ಲದ ವರ್ಗಗಳ ಅಭಿವೃದ್ಧಿಗೆ ಒತ್ತು ನೀಡಿ ಜನರ ಸಮಸ್ಯೆಗಳು ಮತ್ತು ಅಗತ್ಯಗಳ ಆಧಾರದ ಮೇಲೆ ಕೆಳಹಂತದಿಂದ ಯೋಜನೆಗಳನ್ನು ಸಿದ್ಧಪಡಿಸಬೇಕಾಗಿರುತ್ತದೆ. ಪ್ರತಿ ಗ್ರಾಮ ಪಂಚಾಯಿತಿಯು ಐದು ವರ್ಷಗಳ ದೂರದೃಷ್ಟಿ ಯೋಜನೆಯಿಂದ ಪ್ರತಿ ವರ್ಷದ ವಾರ್ಷಿಕ ಯೋಜನೆಗಳನ್ನು ರೂಪಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಜಾಗತಿಕ ಮಟ್ಟದಲ್ಲಿ ಭಾರತವನ್ನು ಸೇರಿದಂತೆ 2030ನೇ ಇಸವಿಯೊಳಗೆ ಸುಸ್ಥಿರ ಅಭಿವೃದ್ಧಿ ಗುರಿಗಳ ಭಾಗವಾಗಿ 17 ಗುರಿಗಳನ್ನು ಸಾಧಿಸಬೇಕಿರುತ್ತದೆ. ಗ್ರಾಮೀಣ ಪ್ರದೇಶದಲ್ಲಿನ ಸಾಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳ ಸಹಭಾಗಿತ್ವದೊಂದಿಗೆ ಅನುಷ್ಠಾನಿಸಬೇಕಿರುತ್ತದೆ. ಇದರ ಮುಂದುವರೆದ ಭಾಗವಾಗಿ ಭಾರತ

ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದಿಂದ ಸುಸ್ಥಿರ ಅಭಿವೃದ್ಧಿ ಗುರಿಗಳ ಸ್ಥಳೀಕರಣ ಪ್ರಕ್ರಿಯೆಗಾಗಿ ತಜ್ಞರ ಸಮಿತಿಯೊಂದನ್ನು 2021ರಲ್ಲಿ ರಚಿಸಲಾಯಿತು. ಸಮಿತಿಯ ವರದಿಯ ಪ್ರಕಾರ ಗ್ರಾಮ ಪಂಚಾಯತಿಗಳಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ನಿಟ್ಟಿನಲ್ಲಿ 9 ವಲಯಗಳನ್ನು ಗುರುತಿಸಲಾಗಿರುತ್ತದೆ ಮತ್ತು ವಲಯವಾರು ಸೂಚ್ಯಂಕಗಳನ್ನು ಸುಸ್ಥಿರ ಅಭಿವೃದ್ಧಿ ಗುರಿಗಳ ಅನ್ವಯ ಶಿಫಾರಸ್ಸು ಮಾಡಿರುತ್ತಾರೆ.

ಗ್ರಾಮ ಪಂಚಾಯತಿ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸುವ ಸಂದರ್ಭದಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಸಹಕಾರಿಯಾಗುವಂತೆ ಮಾನವ ಅಭಿವೃದ್ಧಿ ಮತ್ತು ಸ್ಥಳೀಕರಣಗೊಂಡಿರುವ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವತ್ತ ಗ್ರಾಮ ಪಂಚಾಯಿತಿಗಳು ಗಮನಹರಿಸಬೇಕಾಗಿದೆ.

ಈ ಮೇಲ್ಕಂಡ ಪ್ರಸ್ತಾವನೆಯ ಅನ್ವಯ ಈ ಕೆಳಕಂಡ ಆದೇಶ

**<u>ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ಕಪಂರಾಆ/ಅಭಿವೃದ್ಧಿ/406/2022</u>**

**<u>ಬೆಂಗಳೂರು, ದಿನಾಂಕ: 26.08.2022</u>**

ಪ್ರಸ್ತಾವನೆಯ ಅಂಶಗಳ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ ದೂರದೃಷ್ಠಿ ಯೋಜನೆಯನ್ನು ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿಯ ಕಾಲಮಿತಿಯೊಳಗೆ ಸಾಧಿಸಲು ಎಲ್ಲಾ ಗ್ರಾಮ ಪಂಚಾಯಿತಿಗಳು ಇತರೆ ಅಭಿವೃದ್ಧಿ ಇಲಾಖೆಗಳ ಸಹಕಾರ ಮತ್ತು ಸಮನ್ವಯತೆಯೊಂದಿಗೆ ಸಿದ್ಧಪಡಿಸಬೇಕಿರುತ್ತದೆ. ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸುವ ಕುರಿತಂತೆ ಗುರುತಿಸಿರುವ ವಲಯಗಳು, ಯೋಜನೆಯನ್ನು ಸಿದ್ಧಪಡಿಸುವ ಹಂತಗಳು, ಮೇಲ್ವಿಚಾರಣಾ ಸಮಿತಿಗಳು, ಸಾಮರ್ಥ್ಯ ಅಭಿವೃದ್ಧಿ ಮತ್ತು ತರಬೇತಿ, ಗ್ರಾಮ ಪಂಚಾಯಿತಿಯ ಆಡಳಿತ ಮಂಡಳಿಯ ವಿವರಗಳು, ಸ್ಥಾಯಿ ಸಮಿತಿಯ ವಿವರಗಳು, ಗ್ರಾಮ ಯೋಜನಾ ಸಮಿತಿ, ಗ್ರಾಮ ಪಂಚಾಯಿತಿ ಯೋಜನಾ ಸಮಿತಿ, ಗ್ರಾಮ, ಪಂಚಾಯಿತಿ ಹಂತದ ಸಂಪನ್ಮೂಲಗಳು, ಖರ್ಚಿನ ವಿವರಗಳು (2017-18 ರಿಂದ 2021-22ರ ವರೆಗೆ) ಮತ್ತು ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ಕುರಿತಾದ **ನಮೂನೆಗಳನ್ನು ಅನುಬಂಧ-1ರಲ್ಲಿ** ನೀಡಲಾಗಿದೆ. ಇದರನ್ವಯ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಆದೇಶಿಸಲಾಗಿದೆ.

ಗ್ರಾಮ ಪಂಚಾಯಿತಿ ಹಂತದ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ವಿವರವಾದ ಟೂಲ್‌ಕಿಟ್ (Toolkit)ನ್ನು ಸಿದ್ಧಪಡಿಸಿದ್ದು ಸರ್ಕಾರವು ಅನುಮೋದಿಸಿದೆ. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಇದರನ್ವಯ ಕ್ರಮವಹಿಸಲು ಆದೇಶಿಸಿದೆ. ಗ್ರಾಮ ಪಂಚಾಯತಿ ದೂರದೃಷ್ಠಿ ಯೋಜನೆಯನ್ನು ಪಂಚತಂತ್ರ 2.0 ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವಂತೆ ಆದೇಶಿಸಿದೆ.

ಗ್ರಾಮ ಪಂಚಾಯಿತಿ ಹಂತದ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಅನುವುಗಾರರನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳು ಪ್ರತಿ ಗ್ರಾಮ ಪಂಚಾಯತಿಗೆ ಒಬ್ಬರಂತೆ/ ಅಗತ್ಯವಿದ್ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಈಗಾಗಲೇ ಇಲಾಖೆಯಲ್ಲಿ ಸಾಮಾಜಿಕ ಪರಿಶೋಧನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಂಪನ್ಮೂಲ ವ್ಯಕ್ತಿಗಳನ್ನು